# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 433 (443)

ಸದಸ್ಯರ ಹೆಸರು : ಶ್ರೀ ಟಿ.ಎ.ಶರವಣ (ವಿಧಾನ ಪರಿಷತ್ತು)

ಉತ್ತರಿಸುವ ದಿನಾಂಕ : 16.02.2023

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಪ್ರಶ್ನೆಯ ಉಪ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಜಾತಿವಾರು ಸ್ಥಾಪನೆಯಾಗಿರುವ ಎಲ್ಲಾ ನಿಗಮಗಳಿಗೆ ಪೂರಕ ಅಂದಾಜಿನಲ್ಲಿ ಎಷ್ಟು ಹೆಚ್ಚುವರಿ ಅನುದಾನವನ್ನು ಒದಗಿಸಲಾಗಿದೆ. (ನಿಗಮವಾರು ವಿವರ ನೀಡುವುದು) | ಪೂರಕ ಅಂದಾಜಿನಲ್ಲಿ ನಿಗಮ/ಮಂಡಳಿಗಳಿಗೆ ಒದಗಿಸಿದ ಹೆಚ್ಚುವರಿ ಅನುದಾನದ ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ | 2022-23ನೇ ಸಾಲಿನಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ರೂ. 3 . 0 0 ಕೋಟಿ ಮತ್ತು ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ(ನಿ) ಕ್ಕೆ ರೂ.5.00 ಕೋಟಿ ನೀಡಲಾಗಿದ್ದು, ಶೇ. 1 0 ರಷ್ಟು ಫಲಾನುಭವಿಗಳಿಗೂ ಸಹ ಸಾಲ-ಸಹಾಯಧನ ನೀಡಲು ಸಾಧ್ಯವಾಗದೇ ಈ ನಿಗಮಗಳಿಗೆ ಅನುದಾನ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ(ನಿ) ಹಾಗೂ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಹೆಚ್ಚುವರಿ ಕೋರಿ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಇ | 2022-23ನೇ ಸಾಲಿನಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಮತ್ತು ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ(ನಿ)ಕ್ಕೆ ಪೂರಕ ಅಂದಾಜಿನಲ್ಲಿ ಅನುದಾನವನ್ನು ಒದಗಿಸದಿರಲು ಕಾರಣವೇನು? | 2022-23ನೇ ಸಾಲಿನಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ರೂ.60.00 ಕೋಟಿ ಹೆಚ್ಚುವರಿ ಅನುದಾನ ಕೋರಿದ ಪ್ರಸ್ತಾವನೆಯು ಸ್ವೀಕೃತವಾಗಿರುತ್ತದೆ. ಆದರೆ, ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಬ್ಯಾಂಕ್ ಖಾತೆಯಲ್ಲಿ ರೂ.6.15 ಕೋಟಿ ಇದ್ದು ಹಾಗೂ 2022-23ನೇ ಸಾಲಿಗೆ ಒದಗಿಸಿರುವ ರೂ. 300.00 ಲಕ್ಷ ವೆಚ್ಚವಾಗದೇ ಅನುದಾನವು ಲಭ್ಯವಿದ್ದ ಕಾರಣ ಹೆಚ್ಚುವರಿ ಅನುದಾನ ಒದಗಿಸಿರುವುದಿಲ್ಲ.<br>2022-23ನೇ ಆರ್ಥಿಕ ಸಾಲಿಗೆ ಕರ್ನಾಟಕ ಆರ್ಯ |



Generated from eOffice by G JAGADEESHA, CMO-JS(GJ), JOINT SECREATRY, CMO on 13/02/2023 10:45 AM

| | | |
|---|---|---|
| | | ವೈಶ್ಯ ಸಮುದಾಯ ಅಭಿವೃದ್ಧಿ ನಿಮಗಕ್ಕೆ ಆಯವ್ಯಯದಲ್ಲಿ 500.00 ಲಕ್ಷಗಳು ನಿಗಧಿಯಾಗಿದ್ದು, ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವನೆ ಸ್ವೀಕರಿಸಿದ್ದ ವೇಳೆಯಲ್ಲಿ ಸದರಿ ಅನುದಾನ ಶೇ.50 ರಷ್ಟು ಖರ್ಚಾಗದೇ ಉಳಿದಿರುವುದರಿಂದ ಹೆಚ್ಚುವರಿ ಅನುದಾನದ ಪ್ರಸ್ತಾವನೆಯನ್ನು ಅನುಮೋದಿಸಿರುವುದಿಲ್ಲ. |

**ಸಂಖ್ಯೆ: ಆಇ 181 ವೆಚ್ಚ-7 2023**

(ಬಸವರಾಜ ಬೊಮ್ಮಾಯಿ)

**ಮುಖ್ಯಮಂತ್ರಿ**



Generated from eOffice by G JAGADEESHA, CMO-JS(GJ), JOINT SECREATRY, CMO on 13/02/2023 10:45 AM

## ಅನುಬಂಧ

## ಪೂರಕ ಅಂದಾಜುನಲ್ಲಿ ಹೆಚ್ಚುವರಿಯಾಗಿ ಒದಗಿಸಿರುವ ಅನುದಾನಗಳ ವಿವರ

### ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ನಿಗಮಗಳು

| ಕ್ರ. ಸಂ | ನಿಗಮಗಳು | ಹೆಚ್ಚುವರಿಯಾಗಿ ಒದಗಿಸಿರುವ ಅನುದಾನ (ರೂ.ಕೋಟಿಗಳಲ್ಲಿ) |
|---|---|---|
| 1 | ಡಾ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ | 100.00 |
| 2 | ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ | 7.50 |
| 3 | ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ | 14.00 |
| 4 | ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ ನಿಯಮಿತ | 9.00 |
| 5 | ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತ | 17.00 |
| 6 | ಕರ್ನಾಟಕ ವಿಶ್ವಕರ್ಮ ಅಭಿವೃದ್ಧಿ ನಿಗಮ ನಿಯಮಿತ | 15.00 |
| 7 | ಕರ್ನಾಟಕ ಸವಿತ ಸಮಾಜ ಅಭಿವೃದ್ಧಿ ನಿಗಮ | 5.00 |
| 8 | ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ | 10.00 |
| 9 | ಕರ್ನಾಟಕ ವೀರಶೈವ ಲಿಂಗಾಯತ್ ಅಭಿವೃದ್ಧಿ ನಿಗಮ | 100.00 |
| 10 | ಕರ್ನಾಟಕ ಒಕ್ಕಲಿಗ ಅಭಿವೃದ್ಧಿ ನಿಗಮ | 60.00 |
| 11 | ಕರ್ನಾಟಕ ಮರಾಠ ಅಭಿವೃದ್ಧಿ ನಿಗಮ | 60.00 |
| | ಒಟ್ಟು | **397.50** |

<u>ಸಮಾಜ ಕಲ್ಯಾಣ ಇಲಾಖೆಯಡಿ ಬರುವ ನಿಗಮಗಳು</u>

| ಕ್ರ. ಸಂ | ನಿಗಮಗಳು | ಹೆಚ್ಚುವರಿಯಾಗಿ ಒದಗಿಸಿರುವ ಅನುದಾನ (ರೂ.ಕೋಟಿಗಳಲ್ಲಿ) |
|---|---|---|
| | ಪರಿಶಿಷ್ಟ ಜಾತಿ ಕಲ್ಯಾಣ ಇಲಾಖೆ | |
| 1 | ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ | 100.00 |
| 2 | ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ | 50.00 |
| 3 | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ | 50.00 |
| 4 | ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ | 50.00 |
| 5 | ಬಾಬು ಜಗಜೀವನ್ ರಾಂ ಅಭಿವೃದ್ಧಿ ನಿಗಮ | 25.00 |
| 6 | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ | 20.00 |
| | ಒಟ್ಟು | **295.00** |
| <u>ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯಡಿ ಬರುವ ನಿಗಮ</u> | | |
| 1 | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮ | 115.00 |
| | ಒಟ್ಟು | **115.00** |

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶರವಣ ಟಿ.ಎ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:433ಕ್ಕೆ ಪೂರಕ ಟಿಪ್ಪಣಿ**

ರಾಜ್ಯ ಸರ್ಕಾರವು ಪ್ರತಿ ಆಯವ್ಯಯದಲ್ಲಿ ವಿವಿಧ ಇಲಾಖೆ/ ನಿಗಮ/ ಪ್ರಾಧಿಕಾರಿ/ ಮಂಡಳಿಗಳಿಗೆ ಅನುದಾನವನ್ನು ಹಂಚಿಕೆ ಮಾಡಲಾಗುತ್ತಿದೆ. ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿಯೇ ಆಯಾ ಇಲಾಖೆ/ ನಿಗಮ/ ಪ್ರಾಧಿಕಾರ/ ಮಂಡಳಿಗಳು ಕ್ರಿಯಾಯೋಜನೆಯನ್ನು ತಯಾರಿಸಬೇಕಾಗಿರುತ್ತದೆ. ಆಯವ್ಯಯದಲ್ಲಿ ಒದಗಿಸಿರುವ ಅನುದಾನವನ್ನು ಕ್ರಿಯಾಯೋಜನೆಗಳಿಗೆ ಬಿಡುಗಡೆ ಮಾಡಿದ ನಂತರ ಯೋಜನೆಗಳ ಅನುಷ್ಠಾನಕ್ಕಾಗಿ ಅನುದಾನದ ಕೊರತೆಯಾದರೆ ಹೆಚ್ಚುವರಿ ಅನುದಾನವನ್ನು ಆಯಾ ನಿಗಮ/ ಪ್ರಾಧಿಕಾರಿಗಳಿಗೆ ಒದಗಿಸಲಾಗುತ್ತಿದೆ.

2022-23 ನೇ ಸಾಲಿಗೆ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮಕ್ಕೆ ಒಟ್ಟು ರೂ.500.00 ಲಕ್ಷಗಳು ಮತ್ತು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಒಟ್ಟು ರೂ.383.53 ಲಕ್ಷಗಳನ್ನು ಒದಗಿಸಲಾಗಿದೆ.

2022-23ನೇ ಆರ್ಥಿಕ ಸಾಲಿಗೆ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮಕ್ಕೆ ರೂ.40.00 ಕೋಟಿ ಹೆಚ್ಚುವರಿ ಅನುದಾನ ಮಂಜೂರು ಮಾಡುವಂತೆ ಪ್ರಸ್ತಾವನೆಯು ಸ್ವೀಕೃತವಾಗಿರುತ್ತದೆ. ಆದರೆ, ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವನೆ ಸ್ವೀಕರಿಸಿದ್ದ ವೇಳೆಯಲ್ಲಿ ಸದರಿ ಅನುದಾನ ಶೇ.50 ರಷ್ಟು ಖರ್ಚಾಗದೇ ಉಳಿದಿರುವುದರಿಂದ ಹಾಗೂ ಸ್ವೀಕೃತವಾದ ಪ್ರಸ್ತಾವನೆಯಲ್ಲಿ ಸದರಿ ನಿಗಮಕ್ಕೆ ಬಿಡುಗಡೆ ಮಾಡಿರುವ ಅನುದಾನದವನ್ನು ಸಂಪೂರ್ಣವಾಗಿ ಉಪಯೋಗಿಸಿಕೊಂಡಿರುವ ಬಗ್ಗೆ ಯಾವುದೇ ಮಾಹಿತಿಯಿಲ್ಲದ ಕಾರಣ ಹೆಚ್ಚುವರಿ ಅನುದಾನದ ಪ್ರಸ್ತಾವನೆಯನ್ನು ಅನುಮೋದಿಸಿರುವುದಿಲ್ಲ. ಈ ಬಗ್ಗೆ ಹೆಚ್ಚಿನ ಮಾಹಿತಿ ಕೋರಿದಾಗ್ಯೂ ಮಾಹಿತಿಯು ಇದುವರೆಗೂ ಸ್ವೀಕೃತವಾಗಿರುವುದಿಲ್ಲ

2022-23 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ.60.00 ಕೋಟಿಗಳ ಅನುದಾನವನ್ನು ಹೆಚ್ಚುವರಿಯಾಗಿ ಮಂಜೂರು ಮಾಡುವಂತೆ ಅಧ್ಯಕ್ಷರು, ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಇವರಿಂದ ಪ್ರಸ್ತಾವನೆಯನ್ನು ಸ್ವೀಕೃತವಾಗಿರುತ್ತದೆ.

ಆದರೆ, ಸರ್ಕಾರದಿಂದ ಈವರೆಗೂ ಬಿಡುಗಡೆ ಮಾಡಿರುವ ಅನುದಾನದಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಬ್ಯಾಂಕ್ ಖಾತೆಯಲ್ಲಿ ರೂ.6.15 ಕೋಟಿ ಇದ್ದು, ಈ ವರ್ಷ ಯೋಜನೆಗಳ ಅನುಷ್ಠಾನಕ್ಕೆ ಒದಗಿಸಿರುವ ರೂ.3.00 ಕೋಟಿಗಳನ್ನು ಉಪಯೋಗಿಸಿಕೊಂಡಿಲ್ಲದೇ ಇದ್ದದರಿಂದ ಮಂಡಳಿಗೆ ಒದಗಿಸಿರುವ ಅನುದಾನವನ್ನು ಪೂರ್ಣವಾಗಿ ಬಳಸಿಕೊಂಡ ನಂತರ ಹೆಚ್ಚುವರಿ ಅನುದಾನ ಕೋರಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಲಾಗಿತ್ತು.